# All India Radio: Bangalore
# National Bulletin In Kannada
# 04.01.2026  19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಪ್ರಸಕ್ತ ಸಾಲಿನಲ್ಲಿ ಭಾರತ ಅಕ್ಕಿ ಉತ್ಪಾದನೆಯಲ್ಲಿ ಚೀನಾವನ್ನು ಮೀರಿಸಿದೆ - ಸಚಿವ ಶಿವರಾಜ್ ಸಿಂಗ್ ಚೌಹಾಣ್
2. ಹೊಸ ಕಾರ್ಮಿಕ ಸಂಹಿತೆಗಳು ಚಹಾ ಮತ್ತು ಸಿಂಚೋನಾ ಕಾರ್ಮಿಕರ ಜೀವನ ಬದಲಿಸಿದೆ - ಸಚಿವ ಮನ್ಸುಖ್ ಮಾಂಡವೀಯಾ
3. ವೆನೆಜ್ಯುವೆಲಾ ಇತ್ತೀಚಿನ ಬೆಳವಣಿಗೆ ಬಗ್ಗೆ ಭಾರತ ಕಳವಳ
4. ಉತ್ತರಭಾರತದಲ್ಲಿ ಮುಂದುವರೆದ ದಟ್ಟ ಮಂಜು ; ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಣೆ

<><><><>

೨೦೨೫ ರಲ್ಲಿ ಭಾರತದ ಅಕ್ಕಿ ಉತ್ಪಾದನೆಯು ೧೫೦ ಮಿಲಿಯನ್ ಟನ್‌ಗಳನ್ನು ಮೀರಿದೆ ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಇಂದು ಹೇಳಿದ್ದಾರೆ. ಭಾರತೀಯ ಕೃಷಿ ಸಂಶೋಧನಾ ಮಂಡಳಿ ಅಭಿವೃದ್ಧಿಪಡಿಸಿದ ಸುಧಾರಿತ ೨೫ ಬೆಳೆಗಳ ೧೮೪ ಹೊಸ ತಳಿಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಭಾರತವು ಅಕ್ಕಿ ಉತ್ಪಾದನೆಯಲ್ಲಿ ಚೀನಾವನ್ನು ಮೀರಿಸಿದೆ ಎಂದು ಹೇಳಿದರು. ಭಾರತವು ಜಗತ್ತಿಗೆ ಅಕ್ಕಿ ರಫ್ತು ಮಾಡುವ ಪ್ರಮುಖ ರಾಷ್ಟ್ರವಾಗಿದೆ. ಕಳೆದ ೧೦ ವರ್ಷಗಳಲ್ಲಿ ೩ ಸಾವಿರದ ೨೦೦ಕ್ಕೂ ಹೆಚ್ಚು ಹೊಸ ತಳಿಗಳ ಬೀಜಗಳನ್ನು ಅಭಿವೃದ್ಧಿಪಡಿಸಲಾಗಿದೆ ಎಂದ ಅವರು, ೩ ವರ್ಷಗಳಲ್ಲಿ ದೇಶಾದ್ಯಂತ ವಿವಿಧ ಯೋಜನೆಗಳು ರೈತರನ್ನು ತಲುಪುವಂತೆ ಮಾಡಲು ಸರ್ಕಾರ ಕೆಲಸ ಮಾಡುತ್ತಿದೆ ಎಂದು ಸಚಿವರು ಹೇಳಿದರು.

<><><><>

ಹೊಸ ಕಾರ್ಮಿಕ ಸಂಹಿತೆಗಳು ಪಶ್ಚಿಮ ಬಂಗಾಳದ ಡಾರ್ಜಿಲಿಂಗ್ ಬೆಟ್ಟಗಳು, ಟೆರೈ ಮತ್ತು ಡೂರ್ಸ್ ಪ್ರದೇಶದ ಚಹಾ ಮತ್ತು ಸಿಂಚೋನಾ ಕಾರ್ಮಿಕರ ಜೀವನವನ್ನು ಪರಿವರ್ತಿಸುತ್ತದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಮನ್ಸುಖ್ ಮಾಂಡವಿಯ ಹೇಳಿದ್ದಾರೆ. ಟೀ ಮತ್ತು ಸಿಂಚೋನಾ ಕಾರ್ಮಿಕರು, ಕಾರ್ಮಿಕ ಸಂಘಗಳ ನಾಯಕರೊಂದಿಗೆ ಸಂವಾದ ನಡೆಸಿದ ಅವರು, ಪರ್ವತಗಳಲ್ಲಿ ಭಾರತದ ಮೊದಲ ಕೈಗಾರಿಕಾ ಪ್ರದೇಶವಾಗಿರುವ ಈ ಐತಿಹಾಸಿಕ ಚಹಾ ಬೆಲ್ಟ್‌ನಲ್ಲಿರುವ ಕಾರ್ಮಿಕರು ಹಳೆಯ, ವಸಾಹತುಶಾಹಿ ಯುಗದ ಕಾರ್ಮಿಕ ಪದ್ಧತಿಗಳಿಂದ ಬಳಲುತ್ತಿದ್ದಾರೆ ಎಂದು ತಿಳಿಸಿದ್ದಾರೆ. ಪಶ್ಚಿಮ ಬಂಗಾಳ ಸರ್ಕಾರ ಚಹಾ ಮತ್ತು ಸಿಂಚೋನಾ ಕಾರ್ಮಿಕರಿಗೆ ಗೌರವಾನ್ವಿತ ವೇತನವನ್ನು ನಿರಾಕರಿಸಿದೆ ಮತ್ತು ಮೂಲಭೂತ ಸೌಲಭ್ಯಗಳಿಂದ ವಂಚಿಸಿದೆ. ಹೊಸ ಸಂಹಿತೆಗಳು ಯಾವುದೇ ಕಾರ್ಮಿಕನಿಗೆ ರಾಷ್ಟ್ರೀಯ ನೆಲದ ವೇತನಕ್ಕಿಂತ ಕಡಿಮೆ ವೇತನವನ್ನು ನೀಡದಂತೆ ಖಚಿತಪಡಿಸುತ್ತದೆ ಮತ್ತು ಪಶ್ಚಿಮ ಬಂಗಾಳ ಸರ್ಕಾರವು ಸಹ ಅದನ್ನು ಕಡ್ಡಾಯವಾಗಿ ಜಾರಿಗೆ ತರಬೇಕಾಗುತ್ತದೆ ಎಂದು ಅವರು ಹೇಳಿದರು.

<><><><>

ವೆನೆಜುವೆಲಾದಲ್ಲಿನ ಇತ್ತೀಚಿನ ಬೆಳವಣಿಗೆಗಳ ಬಗ್ಗೆ ಭಾರತ ತೀವ್ರ ಕಳವಳ ವ್ಯಕ್ತಪಡಿಸಿದ್ದು, ಬದಲಾಗುತ್ತಿರುವ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ವೆನೆಜುವೆಲಾ ಜನರ ಯೋಗಕ್ಷೇಮ ಮತ್ತು ಸುರಕ್ಷತೆಗೆ ಭಾರತ ತನ್ನ ಬೆಂಬಲವನ್ನು ಪುನರುಚ್ಚರಿಸಿದೆ. ಕ್ಯಾರಕಾಸ್‌ನಲ್ಲಿರುವ ಭಾರತದ ರಾಯಭಾರ ಕಚೇರಿಯು ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂಪರ್ಕದಲ್ಲಿದೆ ಮತ್ತು ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡುವುದನ್ನು ಮುಂದುವರಿಸುತ್ತದೆ. ಈ ನಡುವೆ, ಇತ್ತೀಚಿನ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು ವೆನೆಜುವೆಲಾಕ್ಕೆ ಎಲ್ಲಾ ಅನಿವಾರ್ಯವಲ್ಲದ ಪ್ರಯಾಣವನ್ನು ತಪ್ಪಿಸಲು ಭಾರತೀಯರಿಗೆ ಸಚಿವಾಲಯ ಸಲಹೆ ಮಾಡಿದೆ.

<><><>

ವೆನೆಜುವೆಲಾದ ಸುಪ್ರೀಂ ಕೋರ್ಟ್ ಉಪಾಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಅವರನ್ನು ಇಂದು ಹಂಗಾಮಿ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಳ್ಳುವಂತೆ ಕೇಳಿದೆ. ಈ ನಡುವೆ, ವಿರೋಧ ಪಕ್ಷದ ನಾಯಕಿ ಮಾರಿಯಾ ಕೊರಿನಾ ಮಚಾದೊ ಅವರು ವಿರೋಧ ಪಕ್ಷದ ಅಭ್ಯರ್ಥಿಯೊಬ್ಬರು ಅಧಿಕಾರ ವಹಿಸಿಕೊಳ್ಳಬೇಕೆಂದು ಕರೆ ನೀಡಿದ್ದಾರೆ. ನಿನ್ನೆ ಅಮೆರಿಕದ ದೊಡ್ಡ ಪ್ರಮಾಣದ ದಾಳಿಯ ನಂತರ ವೆನೆಜುವೆಲಾದ ಅಧ್ಯಕ್ಷ ನಿಕೋಲಸ್ ಮಡುರೊ ಮತ್ತು ಅವರ ಪತ್ನಿಯನ್ನು ಸೆರೆಹಿಡಿದು ದೇಶದಿಂದ ಹೊರಕ್ಕೆ ಕಳುಹಿಸಲಾಗಿತ್ತು.

<><><>

ದೆಹಲಿ, ಹರಿಯಾಣ, ಚಂಡೀಗಢ, ಪಂಜಾಬ್, ಉತ್ತರ ಪ್ರದೇಶ, ಬಿಹಾರ ಮತ್ತು ಒಡಿಶಾದಲ್ಲಿ ಇಂದು ದಟ್ಟವಾದ ಮಂಜಿನ ಪರಿಸ್ಥಿತಿ ಮುಂದುವರೆದಿದ್ದು ಭಾರತೀಯ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ. ಮಧ್ಯಪ್ರದೇಶ, ರಾಜಸ್ಥಾನ, ಉತ್ತರಾಖಂಡ, ಹಿಮಾಚಲ ಪ್ರದೇಶ, ಜಾರ್ಖಂಡ್, ಪಶ್ಚಿಮ ಬಂಗಾಳ, ಛತ್ತೀಸ್‌ಗಢ, ಜಮ್ಮು ಮತ್ತು ಕಾಶ್ಮೀರ, ಲಡಾಖ್ ಮತ್ತು ಭಾರತದ ಈಶಾನ್ಯ ಭಾಗಗಳಲ್ಲಿ ನಾಳೆಯವರೆಗೆ ದಟ್ಟವಾದ ಮಂಜಿನ ಪರಿಸ್ಥಿತಿ ಇರುತ್ತದೆ ಎಂದು ಐಎಂಡಿ ತಿಳಿಸಿದೆ. ದೆಹಲಿ, ಹರಿಯಾಣ, ಚಂಡೀಗಢ, ಪಂಜಾಬ್, ಬಿಹಾರ, ಉತ್ತರಾಖಂಡ ಮತ್ತು ರಾಜಸ್ಥಾನದಲ್ಲಿ ಮುಂದಿನ ಎರಡು ಮೂರು ದಿನಗಳವರೆಗೆ ಶೀತ ಅಲೆಯ ಪರಿಸ್ಥಿತಿ ಇರುತ್ತದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ದೆಹಲಿ-ಎನ್‌ಸಿಆರ್‌ನಲ್ಲಿ ಗಾಳಿಯ ಗುಣಮಟ್ಟ ಅತ್ಯಂತ ಕೆಳಮಟ್ಟದಲ್ಲಿದ್ದು, ಇಂದು ಮಧ್ಯಾಹ್ನ ೧ ಗಂಟೆಯ ಹೊತ್ತಿಗೆ ರಾಷ್ಟ್ರೀಯ ರಾಜಧಾನಿಯ ಸರಾಸರಿ ವಾಯು ಗುಣಮಟ್ಟ ಸೂಚ್ಯಂಕ ೩೦೧ ದಾಖಲಾಗಿದೆ ಎಂದು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ತಿಳಿಸಿದೆ.

<><><>

ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತೆ ನಿಧಿ-ಆರ್‌ಡಿಐ ಪಡೆಯಲು ನವೋದ್ಯಮವು ಮೂರು ವರ್ಷಗಳ ಅಸ್ತಿತ್ವದ ಷರತ್ತನ್ನು ಸರ್ಕಾರ ತೆಗೆದುಹಾಕಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಡೆದ ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಇಲಾಖೆಯ ೪೧ನೇ ಸಂಸ್ಥಾಪನಾ ದಿನಾಚರಣೆಯನ್ನುದ್ದೇಶಿಸಿ ಮಾತನಾಡಿದ ಅವರು, ಸ್ವತಃ ಪ್ರಾರಂಭಿಸುವ ಯಾವುದೇ ಹೊಸ ನವೋದ್ಯಮ ಗುಂಪು ಡಿಎಸ್‌ಐಆರ್ ಮೂಲಕ ಬಂದು ಈ ನಿಧಿಯನ್ನು ಪಡೆಯಬಹುದು ಎಂದು ಹೇಳಿದ್ದಾರೆ.

ಪ್ರಧಾನಿ ಮೋದಿಯವರ ನಾಯಕತ್ವದಲ್ಲಿ ಸರ್ಕಾರವು ಪರಮಾಣು ವಲಯ ಮತ್ತು ಬಾಹ್ಯಾಕಾಶ ವಲಯವನ್ನು ಖಾಸಗಿ ಆಟಗಾರರಿಗೆ ತೆರೆಯುವುದು ಸೇರಿದಂತೆ ಹಲವಾರು ಮಹತ್ವದ ನಿರ್ಧಾರಗಳನ್ನು ತೆಗೆದುಕೊಂಡಿದೆ. ಈ ಹೊಸ ಕ್ಷೇತ್ರಗಳಿಗೆ ಸಜ್ಜಾಗಲು, ಸರ್ಕಾರವು ಅವರ ಉಪಕ್ರಮವನ್ನು ವೇಗಗೊಳಿಸುತ್ತದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><><>

ಮನ್ರೇಗಾ ಭ್ರಷ್ಟಾಚಾರಕ್ಕೆ ಸಮಾನಾರ್ಥಕ ಪದವಾಗಿದೆ, ಅಲ್ಲಿ ಕಾರ್ಮಿಕರನ್ನು ಹೆಚ್ಚಾಗಿ ಕಡೆಗಣಿಸಲಾಗುತ್ತದೆ ಮತ್ತು ನಿಯಮಿತವಾಗಿ ಶೋಷಣೆ ಮಾಡಲಾಗುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೊಸದಾಗಿ ಜಾರಿಗೆ ತಂದಿರುವ ವಿಕಸಿತ ಭಾರತ್ ರೋಜ್‌ಗಾರ್ ಔರ್ ಆಜೀವಿಕಾ ಗ್ಯಾರಂಟಿ ಮಿಷನ್ - ಗ್ರಾಮೀಣ ಕಾಯ್ದೆಯ ಬಗ್ಗೆ ಕಾಂಗ್ರೆಸ್ ಸಾರ್ವಜನಿಕರನ್ನು ದಾರಿ ತಪ್ಪಿಸುತ್ತಿದೆ ಎಂದು ಆರೋಪಿಸಿದ ಅವರು, ಕಾಂಗ್ರೆಸ್ ಪಕ್ಷವು ಮನ್ರೇಗಾವನ್ನು ಸಮರ್ಥಿಸುತ್ತಿಲ್ಲ, ಬದಲಿಗೆ ಅದರೊಳಗೆ ಹುದುಗಿದ್ದ ಭ್ರಷ್ಟಾಚಾರವನ್ನು ಸಮರ್ಥಿಸುತ್ತಿದೆ ಎಂದು ಹೇಳಿದ್ದಾರೆ. ಅಗಾಧ ಬಜೆಟ್ ಹೊಂದಿದ್ದರೂ, ಮನ್ರೇಗಾ ಯಾವುದೇ ಶಾಶ್ವತ ಆಸ್ತಿ ಸೃಷ್ಟಿಗೆ ಅಥವಾ ಗ್ರಾಮಗಳ ದೀರ್ಘಕಾಲೀನ ಅಭಿವೃದ್ಧಿಗೆ ಕಾರಣವಾಗಲಿಲ್ಲ ಎಂದು ಹಿಂದಿನ ಕಾಯ್ದೆಯ ನ್ಯೂನತೆಗಳನ್ನು ಎತ್ತಿ ತೋರಿಸುತ್ತಾ, ವಿಕಸಿತ ಭಾರತ್ ಜಿ-ರಾಮ್-ಜಿ ಕಾರ್ಮಿಕರ ಹಿತಾಸಕ್ತಿಗಳನ್ನು ರಕ್ಷಿಸುತ್ತದೆ ಎಂದು ಸಚಿವರು ಹೇಳಿದರು.

<><><>

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಇಂದಿನಿಂದ ಇದೇ ೧೦ ರವರೆಗೆ ಫ್ರಾನ್ಸ್ ಮತ್ತು ಲಕ್ಸೆಂಬರ್ಗ್‌ಗೆ ಅಧಿಕೃತ ಭೇಟಿ ನೀಡಲಿದ್ದಾರೆ. ಪ್ಯಾರಿಸ್‌ನಲ್ಲಿ ಅವರು, ಫ್ರೆಂಚ್ ವಿದೇಶಾಂಗ ಸಚಿವ ಜೀನ್ ನೋಯೆಲ್ ಬ್ಯಾರಟ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಭಾರತ-ಫ್ರಾನ್ಸ್ ಕಾರ್ಯತಂತ್ರದ ಪಾಲುದಾರಿಕೆಯ ಅಡಿಯಲ್ಲಿ ಸಾಧಿಸಿದ ಪ್ರಗತಿ ಮತ್ತು ಜಾಗತಿಕ ಪ್ರಾಮುಖ್ಯತೆಯ ವಿಷಯಗಳ ಕುರಿತು ಅವರು ಚರ್ಚಿಸಲಿದ್ದಾರೆ. ಡಾ. ಜೈಶಂಕರ್ ಗೌರವಾನ್ವಿತ ಅತಿಥಿಯಾಗಿ ೩೧ನೇ ಫ್ರೆಂಚ್ ರಾಯಭಾರಿಗಳ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಅಲ್ಲಿ ಅವರು, ಲಕ್ಸೆಂಬರ್ಗ್‌ನ ಉಪ ಪ್ರಧಾನ ಮಂತ್ರಿ ಮತ್ತು ವಿದೇಶಾಂಗ ಸಚಿವ ಕ್ಸೇವಿಯರ್ ಬೆಟ್ಟೆಲ್ ಮತ್ತು ದೇಶದ ಹಿರಿಯ ನಾಯಕರೊಂದಿಗೆ ಚರ್ಚೆ ನಡೆಸಲಿದ್ದಾರೆ. ಅವರು ಲಕ್ಸೆಂಬರ್ಗ್‌ನಲ್ಲಿರುವ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಹನ ನಡೆಸಲಿದ್ದಾರೆ.

<><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಎರಡು ದಿನಗಳ ಭೇಟಿಗಾಗಿ ಇಂದು ತಿರುಚ್ಚಿಗೆ ಭೇಟಿ ನೀಡಿದ್ದಾರೆ. ತಿರುಚ್ಚಿ ವಿಮಾನ ನಿಲ್ದಾಣದಲ್ಲಿ ಅವರನ್ನು ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಡಾ. ಎಲ್.ಮುರುಗನ್ ಸ್ವಾಗತಿಸಿದರು. ನಂತರ ಪಕ್ಷದ ಕಾರ್ಯಕಾರಿ ಸಭೆಯಲ್ಲಿ ಭಾಗವಹಿಸಿದರು. ಪುದುಕ್ಕೊಟ್ಟೈನಲ್ಲಿ ಬಿಜೆಪಿ ಆಯೋಜಿಸಿರುವ ಸಾರ್ವಜನಿಕ ಸಭೆಯಲ್ಲಿ ಅವರು ಭಾಗವಹಿಸಲಿದ್ದಾರೆ. ಅವರು ನಾಳೆ ತಿರುಚ್ಚಿಯ ಶ್ರೀರಂಗಂ ದೇವಾಲಯದಲ್ಲಿ ದರ್ಶನ ಪಡೆಯಲಿದ್ದಾರೆ ಮತ್ತು ಪೊಂಗಲ್ ಉತ್ಸವದಲ್ಲಿಯೂ ಭಾಗವಹಿಸಲಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರು ಚಿನ್ನ, ಮೊಬೈಲ್ ಫೋನ್‌ಗಳು, ದ್ವಿಚಕ್ರ ವಾಹನಗಳು ಮತ್ತು ನಾಲ್ಕು ಚಕ್ರಗಳಂತಹ ಉಚಿತ ವಾಹನಗಳನ್ನು ಘೋಷಿಸಿದ್ದಾರೆ ಎಂದು ಹೇಳುವ ವೀಡಿಯೊವನ್ನು ಸರ್ಕಾರ ಸುಳ್ಳು ಎಂದು ತಳ್ಳಿಹಾಕಿದೆ. ಪ್ರಧಾನಿ ಅಂತಹ ಯಾವುದೇ ಘೋಷಣೆಯನ್ನು ಮಾಡಿಲ್ಲ ಎಂದು ಕೇಂದ್ರ ವಾರ್ತಾ ಶಾಖೆಯ ಸತ್ಯ ಪರಿಶೀಲನಾ ಘಟಕ ತಿಳಿಸಿದೆ. ಈ ವೀಡಿಯೊವನ್ನು ಕೃತಕಬುದ್ಧಿಮತ್ತೆ- ರಚಿತ ಮತ್ತು ನಕಲಿ. ನಾಗರಿಕರು ಅಂತಹ ತಪ್ಪು ಮಾಹಿತಿಯ ಬಗ್ಗೆ ಜಾಗರೂಕರಾಗಿರಬೇಕು ಮತ್ತು ಅವುಗಳನ್ನು ನಂಬುವ ಮೊದಲು ಸತ್ಯಗಳನ್ನು ಪರಿಶೀಲಿಸಬೇಕೆಂದು ಸರ್ಕಾರ ಒತ್ತಾಯಿಸಿದೆ.

<><><>

ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಯುನೈಟೆಡ್ ಅರಬ್ ಎಮಿರೇಟ್ಸ್-ಯುಎಇ ಮತ್ತು ಶ್ರೀಲಂಕಾಕ್ಕೆ ನಾಳೆ ಭೇಟಿ ನೀಡಲಿದ್ದಾರೆ. ಇದು ಸ್ನೇಹಪರ ವಿದೇಶಗಳೊಂದಿಗೆ ರಕ್ಷಣಾ ಸಹಕಾರ ಮತ್ತು ಮಿಲಿಟರಿ ಸಂಬಂಧಗಳನ್ನು ಬಲಪಡಿಸುವ ಭಾರತದ ನಿರಂತರ ಪ್ರಯತ್ನದ ಭಾಗವಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>